ಶ್ರೀ ಎ. ಕೃಷ್ಣಪ್ಪ (ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು) :

ಅ)

ಪಶು ಆಸ್ಪತ್ರೆ	ಪಶು ಚಿಕಿತ್ಸಾಲಯ	ಪ್ರಾಥಮಿಕ ಪಶು ಚಿಕಿತ್ಸಾಲಯ ಕೇಂದ್ರ
1. ಭಾಲ್ಕಿ	1. ನಿಟ್ಟೂರು	1. ಲಕನಗಾಂವ್
	2. ಬಾಂದೆಬ್ಬಾ	2. ಬಾಳೂರು
	3. ಡಾಡಗಿ	3. ಹಲ್ಬರ್ಗಾ
	4. ಜನವಾಡ	4. ಅಳಿಯಾಂಬರ
	5. ಧನ್ನೂರಾ	5. ಮರ್ಕಲ್
	6. ದೋಣಗಾಪುರ	6. ಕೋನಮೇಳಕುಂದಾ
		7. ಚಾಂತಿ
		8. ಕಣಜಿ
ಒಟ್ಟು 1	**6**	**8** **= 15**

ಆ) ಮಂಜೂರಾಗಿರುವ ವೈದ್ಯರ ಸಂಖ್ಯೆ 8
ಕಾರ್ಯನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ 3
ಖಾಲಿ 5

ಇ) ರಾಜ್ಯದಲ್ಲಿರುವ ಪಶುವೈದ್ಯಾಧಿಕಾರಿಗಳ ಖಾಲಿ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಿ ಪ್ರಕ್ರಿಯೇ ಪ್ರಾರಂಭವಾಗಿದೆ.

ಈ) ಇಲ್ಲ.

ಹುಲಸೂರು ಮತ ಕ್ಷೇತ್ರದಲ್ಲಿ ರಸ್ತೆಗಳ ಅಭಿವೃದ್ಧಿ

3159 - ಶ್ರೀ ರಾಜೇಂದ್ರ ವರ್ಮ (ಹುಲಸೂರು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮೀಣ ಭಾಗದ ಸುಮಾರು 8500 ಕಿಮೀ ಲೋಕೋಪಯೋಗಿ ರಸ್ತೆಗಳ ಅಭಿವೃದ್ಧಿ ಕಾಮಗಾರಿಯನ್ನು ರೂ. 150.00 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ತೆಗೆದುಕೊಂಡಿರುವುದು ನಿಜವಲ್ಲವೆ? ಈ ಎಲ್ಲಾ ಕಾಮಗಾರಿಗಳನ್ನು ಇನ್ನೂ ಎರಡೂವರೆ ತಿಂಗಳಿನಲ್ಲಿ ಪೂರ್ಣಗೊಳಿಸಲು ತೀರ್ಮಾನಿಸಿರುವುದು ನಿಜವಲ್ಲವೆ?

ಆ) ಹಾಗಿದ್ದಲ್ಲಿ ಮೇಲ್ಕಂಡ ಯೋಜನೆಯಲ್ಲಿ ಬೀದರ್ ಜಿಲ್ಲೆಯಲ್ಲಿ ವಿಶೇಷವಾಗಿ ಹುಲಸೂರು ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಕಿ.ಮೀ ರಸ್ತೆಯನ್ನು ಅಭಿವೃದ್ಧಿಗೊಳಿಸಲಾಗುವುದು ಹಾಗೂ ಇದಕ್ಕಾಗಿ ಎಷ್ಟು ಹಣವನ್ನು ನಿಗದಿಪಡಿಸಲಾಗಿದೆ, ಹಾಗೂ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ? (ವಿಧಾನಸಭಾ ಕ್ಷೇತ್ರವಾರು ಅಂಕಿ ಅಂಶಗಳನ್ನು ನೀಡುವುದು)

ಶ್ರೀ ಧರ್ಮ್ ಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಲೋಇ ರಸ್ತೆಗಳ (ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆ) ದುರಸ್ತಿಗಾಗಿ 75 ಕೋಟಿ ರೂ. ಗಳ ಯೋಜನೆಯಲ್ಲಿ ಸುಮಾರು 947 ಕಿಮೀ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಯೋಜಿಸಲಾಗಿದೆ. ಎಲ್ಲಾ ಕಾಮಗಾರಿಗಳನ್ನು ಪ್ರಾರಂಭಿಸಲಾಗಿದ್ದು, ಮಾರ್ಚ್ 2001 ಅಂತ್ಯಕ್ಕೆ ಕಾಮಗಾರಿಗಳನ್ನು ಮುಗಿಸಲು ಯೋಜಿಸಲಾಗಿದೆ.

ಆ) ಈ ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆಯ ಹುಲಸೂರು ಮತಕ್ಷೇತ್ರದಲ್ಲಿ 3 ರಸ್ತೆ ಕಾಮಗಾರಿಗಳನ್ನು ರೂ. 71.00 ಲಕ್ಷಗಳ ಅಂದಾಜಿನಲ್ಲಿ 12.70 ಕಿಮೀ ಉದ್ದದ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. 1 ಕಾಮಗಾರಿಯು ಪ್ರಗತಿಯಲ್ಲಿದ್ದು ಉಳಿದ 2 ಕಾಮಗಾರಿಗಳನ್ನು ಪ್ರಾರಂಭಿಸಬೇಕಾಗಿದೆ. ರೂ. 10 ಲಕ್ಷಗಳ ಹಣ ಬಿಡುಗಡೆ ಮಾಡಲಾಗಿದೆ. ಇನ್ನೂ ಯಾವುದೇ ಹಣ ಖರ್ಚು ಮಾಡಿರುವುದಿಲ್ಲ. ಈ ಯೋಜನೆ ಅಡಿಯಲ್ಲಿ ವಿಧಾನ ಸಭಾ ಕ್ಷೇತ್ರವಾರು ವಿವರಗಳು ಕೆಳಗಿನಂತಿವೆ.

ವಿಧಾನಸಭಾ ಕ್ಷೇತ್ರವಾರು ವಿವರಗಳು

	ವಿಧಾನಸಭಾ ಮತಕ್ಷೇತ್ರ	ಅಂದಾಜು ಮೊತ್ತ (ಲಕ್ಷ ರೂ.)	ಅಭಿವೃದ್ಧಿಪಡಿಸಬೇಕಾದ ರಸ್ತೆ ಉದ್ದ	2000-01ನೇ ಸಾಲಿನ ಅನುದಾನ (ಲಕ್ಷ ರೂ)
1.	ಬೀದರ್	20.00	6.00	20.00
2.	ಹುಮನಾಬಾದ್	18.00	3.00	18.00
3.	ಬಾಲ್ಕಿ	14.00	0.93	14.00
4.	ಔರಾದ್	62.00	5.00	62.00
5.	ಬಸವಕಲ್ಯಾಣ	11.50	8.80	11.50
6.	ಹುಲಸೂರು	71.00	12.70	71.00
	ಒಟ್ಟು	**196.50**	**36.43**	**196.50**